76

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಡಾ: ವೈ.ಎ. ನಾರಾಯಣಸ್ವಾಮಿ ರವರಿಂದ ನಿಯಮ 330ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ**

ಪ್ರಸ್ತಾಪಿಸಿರುವ ವಿಷಯ:-

ಕರ್ನಾಟಕ ರಾಜ್ಯದಲ್ಲಿ 2006ರ ಏಪ್ರಿಲ್ ನಂತರ ನೇಮಕಾತಿಗೊಂಡ ಸರ್ಕಾರಿ ನೌಕರರಿಗೆ ಹೊಸ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುವುದರಿಂದ ಭವಿಷ್ಯದಲ್ಲಿ ಅವರಿಗೆ ಸಾಮಾಜಿಕ ಭದ್ರತೆಯ ಸಮಸ್ಯೆ ಬಹಳ ಗಂಭೀರವಾಗಿರುವುದರಿಂದ ಹಳೆ ಪಿಂಚಣಿ ಯೋಜನೆಯನ್ನು ಸರ್ಕಾರಿ ನೌಕರರಿಗೆ ಜಾರಿಗೊಳಿಸುವ ಬಗ್ಗೆ".

ಉತ್ತರ:-

ಹಳೆಯ ಪಿಂಚಣಿ ಯೋಜನೆಯ ಆರ್ಥಿಕ ಹೊರೆಯನ್ನು ನಿಭಾಯಿಸಲು ಸಾಕಷ್ಟು ನಿಧಿಯ ಆಧಾರ ಇಲ್ಲದಿರುವುದರಿಂದ ಹಾಗೂ ರಿಸರ್ವ್ ಬ್ಯಾಂಕ್ ರಚಿಸಿದ ಸಮಿತಿಯ ವರದಿಯ ಶಿಫಾರಸ್ಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ದಿನಾಂಕ: 01.01.2004ರಿಂದ ಜಾರಿಗೆ ಬರುವಂತೆ ನೂತನ ಪಿಂಚಣಿ ಯೋಜನೆಯನ್ನು ಜಾರಿಗೆ ತಂದಿದ್ದು, ಅದರಂತೆ ಇತರೆ ರಾಜ್ಯಗಳು ಈ ಯೋಜನೆಯನ್ನು ಅಳವಡಿಸಿಕೊಂಡ ಹಿನ್ನಲೆಯಲ್ಲಿ, ಕರ್ನಾಟಕ ರಾಜ್ಯವು ಕೂಡ ದಿನಾಂಕ: 01.04.2006ರಿಂದ ಈ ಯೋಜನೆಯನ್ನು ಜಾರಿಗೊಳಿಸಿರುತ್ತದೆ. ಈ ಯೋಜನೆಯು ಸರ್ಕಾರದ ನೀತಿ ನಿಯಮಗಳಿಗೆ ಸಂಬಂಧಿಸಿರುತ್ತದೆ. ಈಗಾಗಲೇ ಈ ಯೋಜನೆಯನ್ನು ದಿನಾಂಕ: 01.04.2006ರಿಂದ ಜಾರಿಗೊಳಿಸಿರುವುದರಿಂದ ಮತ್ತೆ ಹಳೆಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸುವ ಉದ್ದೇಶವಿರುವುದಿಲ್ಲ.

ಆದರೆ, ನೂತನ ಪಿಂಚಣಿ ಯೋಜನೆಗೆ ಸೂಕ್ತ ಬದಲಾವಣೆ/ಮಾರ್ಪಾಡು ಮಾಡಲು ಸರ್ಕಾರದ ಆದೇಶ ಸಂಖ್ಯೆ: ಆಇ 107 ಪಿಇಎನ್ 2018, ದಿನಾಂಕ: 11.12.2018 ರನ್ವಯ ಅಧಿಕಾರಿಗಳ ಸಮಿತಿಯನ್ನು ರಚಿಸಿದೆ.

ಅಧಿಕಾರಿಗಳ ಸಮಿತಿಯು ನೀಡುವ ವರದಿಯ ನಂತರ ನಿರ್ಧರಿಸಲಾಗುವುದು.

**ಸಂಖ್ಯೆ: ಆಇ 28 ಪಿಇಎನ್ 2020**

ಬಿ.ಎಸ್. ಯಡಿಯೂರಪ್ಪ

(ಬಿ.ಎಸ್. ಯಡಿಯೂರಪ್ಪ)

ಮುಖ್ಯಮಂತ್ರಿ